**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ 173 ಇಎಸ್ ಟಿ(7) 2022 T491(A)

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು – 560001,
ದಿನಾಂಕ: 15-03-2023.

**: ಸುತ್ತೋಲೆ :**

**ವಿಷಯ:** ಆಂತರಿಕ ದೂರು ಸಮಿತಿ ರಚಿಸುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಮಮಇ 28 ರಾಮಅ 2015 ದಿ:18-11-2015 ಮತ್ತು ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಮಮಇ 33 ರಾಮಅ 2018, ದಿ:26.06.2018.

2. ನಿರ್ದೇಶಕರವರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ: ಡಿಟಿಇ 86 ಇಎಸ್ ಟಿ(7) 2017, ದಿ: 14-10-2019.

3. Govt.of India Gazette Notification New Delhi,dated: 20-06-2012, The Protection of Children from Sexual Offences Act 2012 (No. 32 of2012)

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ರ ಸರ್ಕಾರದ ಆದೇಶದನ್ವಯ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇದಿಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013ರಂತೆ ಕಛೇರಿ/ಸಂಸ್ಥೆ/ಅಥವಾ ಕೆಲಸದ ಸ್ಥಳಗಳಲ್ಲಿ ಒಂದು ಆಂತರಿಕ ದೂರು ಸಮಿತಿ ಯನ್ನು ಕಡ್ಡಾಯವಾಗಿ ರಚನೆ ಮಾಡಬೇಕಾಗಿದ್ದು, ಅದರಂತೆ ಕ್ರಮವಹಿಸಲು ಈಗಾಗಲೇ ಉಲ್ಲೇಖ(2) ಈ ಕಛೇರಿ ಸುತ್ತೋಲೆಯನುಸಾರ ರಾಜ್ಯದ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳು, ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಕಿರಿಯ ತಾಂತ್ರಿಕ ಶಾಲೆಗಳಿಗೆ ಸೂಚಿಸಿರುವ ಬಗ್ಗೆ ಗಮನವನ್ನು ಸೆಳೆಯಲಾಗಿದೆ.

ಪ್ರಸ್ತುತ, "ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇದಿಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013"ರ ಮಾರ್ಗಸೂಚಿ ಅನುಸಾರ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಮಮಇ 28 ರಾಮಅ 2015 ಬೆಂಗಳೂರು ದಿ:18.11.2015 ಮತ್ತು ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಮಮಇ 33 ರಾಮಅ 2018 ಬೆಂಗಳೂರು ದಿ:26.06.2018 ರ ಆದೇಶಗಳನ್ವಯ ಇಲಾಖೆಯ ಎಲ್ಲಾ ಸಂಸ್ಥೆಗಳಲ್ಲಿ ಕಡ್ಡಾಯವಾಗಿ ಆಂತರಿಕ ದೂರು ಸಮಿತಿಯನ್ನು ರಚಿಸಲು ಮತ್ತು ಉಲ್ಲೇಖಿತ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲು ಸೂಚಿಸಲಾಗಿದೆ.

ಮುಂದುವರೆದು, ಸಂಸ್ಥೆಗಳಲ್ಲಿ ಸ್ವೀಕೃತವಾಗುವ ದೂರಿನ ಸ್ವರೂಪಗಳ ಆಧಾರದ ಮೇಲೆ ಉಲ್ಲೇಖ(2)ರ "ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಅಧಿನಿಯಮ 2012"ರ (ಪೋಕ್ಸೋ) ಮಾರ್ಗಸೂಚಿ ಅನುಸಾರ ಕ್ರಮ ವಹಿಸುವಂತೆ ತಿಳಿಸಲಾಗಿದೆ.

(.........2)

ಉಲ್ಲೇಖಿತ ಮಾರ್ಗಸೂಚಿಗಳ ಪಾಲನೆಯಲ್ಲಿ ವ್ಯತ್ಯಯವಾದಲ್ಲಿ ಪ್ರಾಂಶುಪಾಲರೇ ನೇರ ಹೊಣೆಗಾರರಾಗಿರುತ್ತಾರೆ.

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ:**

ಸರ್ಕಾರಿ / ಅನುದಾನಿತ / ಖಾಸಗಿ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್ / ಕಿರಿಯ ತಾಂತ್ರಿಕ ಶಾಲೆ ಪ್ರಾಂಶುಪಾಲರು– ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ

**ಪ್ರತಿ:**

1. ಆಯುಕ್ತರ ಆಪ್ತ ಶಾಖೆಗೆ
2. ನಿರ್ದೇಶಕರ ಆಪ್ತ ಶಾಖೆಗೆ
3. ಇ-ಆಡಳಿತ ಘಟಕಕ್ಕೆ ವೆಬ್ ಸೈಟ್‌ನಲ್ಲಿ ಪ್ರಚುರ ಪಡಿಸಲು